**All India Radio: Bangalore**
**Regional Bulletin In Kannada**
**18.11.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.11.2025 / 6.40 p.m.**

ಮುಖ್ಯಾಂಶಗಳು

೧. ತಂತ್ರಜ್ಞಾನ ಶೃಂಗಸಭೆಯಲ್ಲಿ ರಾಜ್ಯ ಸರ್ಕಾರದಿಂದ ಎಐ ಶಕ್ತ ಅಗ್ಗದ ಬೆಲೆಯ ಕಂಪ್ಯೂಟರ್ ಬಿಡುಗಡೆ

೨. ಮೇಕೆದಾಟು ಯೋಜನೆ, ಅನುಷ್ಠಾನ ವಿಚಾರ - ಉನ್ನತ ಅಧಿಕಾರಿಗಳೊಂದಿಗೆ ಉಪಮುಖ್ಯಮಂತ್ರಿ ಸಭೆ

೩. ನಾಳೆ ಕಿಸಾನ್ ಸಮ್ಮಾನ್ ನಿಧಿಯ ೨೧ನೇ ಕಂತು ಪ್ರಧಾನಿ ನರೇಂದ್ರ ಮೋದಿ ಅವರಿಂದ ಬಿಡುಗಡೆ

೪. ಇದೇ ೨೮ರಿಂದ ರಾಜ್ಯಾದ್ಯಂತ ಗೃಹಲಕ್ಷ್ಮಿ ವಿವಿಧೋದ್ದೇಶ ಸ್ವ-ಸಹಾಯ ಸಹಕಾರ ಬ್ಯಾಂಕ್ ಆರಂಭ.

೫. ಮೆಕ್ಕೆಜೋಳ ಖರೀದಿಸುವಂತೆ ರೈತರ ಆಗ್ರಹ ; ರಾಜ್ಯ ಸರ್ಕಾರಕ್ಕೆ ಇದೇ ೨೧ರವರೆಗೆ ಗಡುವು

***************

ಮೂರು ದಿನಗಳ ತಂತ್ರಜ್ಞಾನ ಶೃಂಗಸಭೆಗೆ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ್ದಾರೆ.

ಶೃಂಗಸಭೆಯಲ್ಲಿ ಸುಮಾರು ೧೫೦ ನವೋದ್ಯಮ ಸಂಸ್ಥೆಗಳು ಭಾಗಿಯಾಗಿವೆ. ಫ್ಯೂಚರ್ ಮೇಕರ್ಸ್ ಕಾಂಕ್ಲೇವ್ ಕಾರ್ಯಕ್ರಮವನ್ನು ಈ ಬಾರಿ ಆಯೋಜಿಸಲಾಗಿದೆ. ಇದರಲ್ಲಿ ೧೦ ಸಾವಿರ ಉದ್ದಿಮೆ ಸಂಸ್ಥಾಪಕರು, ಹೂಡಿಕೆದಾರರು ಭಾಗಿಯಾಗಲಿದ್ದಾರೆ. ಇದೇ ವೇಳೆ ಎಸ್‌ಟಿಪಿಐ, ಐಟಿ ಎಕ್ಸ್‌ಪೋರ್ಟ್ ಪ್ರಶಸ್ತಿ ೨೦೨೪-೨೫ ಅನ್ನು ಪ್ರದಾನ ಮಾಡಲಾಗುತ್ತಿದೆ. ಈ ವರ್ಷ ೧೦ ಪ್ರಮುಖ ವಿಭಾಗಗಳಲ್ಲಿ ಹಾಗೂ ೨೭ ಇತರೆ ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲು ನಿರ್ಧರಿಸಲಾಗಿದೆ.

ರಾಜ್ಯ ಸರ್ಕಾರ ಅಗ್ಗದ ಬೆಲೆಗೆ ಎಐ ಶಕ್ತ ಕಂಪ್ಯೂಟರೊಂದನ್ನು ಅಭಿವೃದ್ಧಿಪಡಿಸಿದೆ. ಬೆಂಗಳೂರು ಟೆಕ್ ಸಮಿಟ್‌ನಲ್ಲಿ ಈ ವಿಶೇಷ ಕಂಪ್ಯೂಟರ್ ಅನ್ನು ಅನಾವರಣಗೊಳಿಸಲಾಗಿದೆ. ಮಧ್ಯಮ ವರ್ಗದ ಜನರ ಕೈಗೆ ಕಡಿಮೆ ಬೆಲೆಗೆ ಪ್ರಬಲ ಕಂಪ್ಯೂಟರ್ ಒದಗಿಸುವ ಉದ್ದೇಶದಿಂದ ಇದನ್ನು ರೂಪಿಸಲಾಗಿದೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, ರಾಜ್ಯ ಸರ್ಕಾರ ಇಂದು ಜನ ಸಾಮಾನ್ಯರಿಗೆ ಕೈಗೆಟಕುವ ದರದಲ್ಲಿ ಕೃತಕಬುದ್ಧಿಮತ್ತೆ ಆಧಾರಿತ ಕಂಪ್ಯೂಟರ್ ಅನಾವರಣಗೊಳಿಸಿದೆ ಎಂದು ತಿಳಿಸಿದ್ದಾರೆ.

ಈ ಕಂಪ್ಯೂಟರ್‌ನ ಬೆಲೆ ೧೮ ಸಾವಿರದ ೯೯೯ ರೂಪಾಯಿ ಎಂದು ಹೇಳಿದ್ದಾರೆ. ವಿಶ್ವದಲ್ಲಿ ಇಷ್ಟು ಅಗ್ಗದ ಕಂಪ್ಯೂಟರ್ ಅನ್ನು ಇದೇ ಮೊದಲ ಬಾರಿಗೆ ಪರಿಚಯಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಪ್ರಿಯಾಂಕ್ ಖರ್ಗೆ

ರಾಜ್ಯದಲ್ಲಿ ನವೋದ್ಯಮಗಳು ಬಹುದೊಡ್ಡ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದ್ದಾರೆ. ನವೋದ್ಯಮಗಳಿಗೆ ಉತ್ತೇಜನ ನೀಡಿದರೆ ಆರ್ಥಿಕ ಸ್ಥಿರತೆ, ನೂತನ ಆವಿಷ್ಕಾರ, ಉದ್ಯೋಗ ಸೃಷ್ಟಿ, ಜಿಡಿಪಿ ಹೆಚ್ಚಳವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ಮೇಕೆದಾಟು ಯೋಜನೆ ಅನುಷ್ಠಾನ ಸಂಬಂಧ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಇಂದು ಉನ್ನತ ಮಟ್ಟದ ಅಧಿಕಾರಿಗಳ ಜತೆ ಸಭೆ ನಡೆಸಿದರು.

ಸಭೆಯಲ್ಲಿ ಜಲ ಸಂಪನ್ಮೂಲ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಜಿಲ್ಲಾಧಿಕಾರಿಗಳಾದ ಕುಮಾರ, ಯಶವಂತ್ ಗುರುಕಾರ್, ಶಿಲ್ಪಾನಾಗ್, ಹೆಚ್ಚುವರಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮನೋಜ್ ಕುಮಾರ್, ಉಪಮುಖ್ಯಮಂತ್ರಿ ಕಾರ್ಯದರ್ಶಿ ರಾಜೇಂದ್ರ ಚೋಳನ್, ತಾಂತ್ರಿಕ ಸಲಹೆಗಾರ ಕೆ ಜೈಪ್ರಕಾಶ್, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಮತ್ತಿತರರು ಭಾಗವಹಿಸಿದ್ದರು.

***************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಕೊಯಮತ್ತೂರಿನಲ್ಲಿ ಕಿಸಾನ್ ಸಮ್ಮಾನ್ ನಿಧಿಯ ೨೧ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ. ಸುಮಾರು ೯ ಕೋಟಿ ರೈತರು ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ ಪ್ರಯೋಜನ ಪಡೆಯಲಿದ್ದಾರೆ.

ಬೆಂಗಳೂರಿನ ಐಸಿಎಆರ್-ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯಲ್ಲಿ ಇದರ ನೇರ ಪ್ರಸಾರವಿದ್ದು, ರಾಜ್ಯದ ೨೦೦ ರೈತರು ಭಾಗವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬೆಂಗಳೂರು ಗ್ರಾಮಾಂತರ ಸಂಸದ ಡಾ. ಸಿ.ಎನ್. ಮಂಜುನಾಥ್ ಭಾಗವಹಿಸಲಿದ್ದಾರೆ.

***************

ಮಕ್ಕಳ ಪೌಷ್ಟಿಕ ಆಹಾರ ಕಳವು ತಡೆಯಲು ತಂತ್ರಜ್ಞಾನ ಅಳವಡಿಸಲು ಇಲಾಖೆ ನಿರ್ಧರಿಸಿದೆ ಎಂದು ಮಹಿಳಾ ಮತ್ತು ಮಕ್ಕಳ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೮ ಸಾವಿರ ಅಂಗನವಾಡಿಗಳಲ್ಲಿ ಸರ್ಕಾರಿ ಮಾಂಟೆಸ್ಸರಿ ಶಿಕ್ಷಣ ಆರಂಭಿಸಲಾಗುವುದು ಎಂದು ಹೇಳಿದ್ದಾರೆ.

ಗೃಹ ಲಕ್ಷ್ಮೀ ಯೋಜನೆಯಿಂದ ಇಲಾಖೆಗೆ ಅತಿ ಹೆಚ್ಚು ಹೆಸರು ಬಂದಿದ್ದು, ಜಿಲ್ಲೆಯಲ್ಲಿ ಶೇಕಡ ೯೯.೯೧ ಪ್ರಗತಿ ಸಾಧಿಸಲಾಗಿದೆ, ಇದೇ ೨೮ರಂದು ರಾಜ್ಯಾದ್ಯಂತ ಗೃಹಲಕ್ಷ್ಮೀ ವಿವಿದೋದ್ದೇಶ ಸ್ವಸಹಾಯ ಸಹಕಾರ ಬ್ಯಾಂಕ್ ಆರಂಭಿಸಲಾಗುತ್ತಿದೆ ತಿಳಿಸಿದ್ದಾರೆ.

***************

ಬೆಂಗಳೂರು-ತುಮಕೂರು ಮೆಟ್ರೋ ಯೋಜನೆಯ ಅನೇಕ ವಿಚಾರಗಳು ಸಂಸದ ತೇಜಸ್ವಿಸೂರ್ಯ ಗಮನದಲ್ಲಿ ಇಲ್ಲದಿರುವುದರಿಂದ ಯೋಜನೆಯ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿನಿತ್ಯ ತುಮಕೂರಿನಿಂದ ಸಾವಿರಾರು ಜನರು ಪ್ರಯಾಣ ಮಾಡುತ್ತಾರೆ. ನೆಲಮಂಗಲ, ದಾಬಸ್‌ಪೇಟೆ, ಕ್ಯಾತ್ಸಂದ್ರ ಭಾಗ ವೇಗವಾಗಿ ಬೆಳೆಯುತ್ತಿವೆ.

ತುಮಕೂರಿನಲ್ಲಿ ೨೦ ಸಾವಿರ ಎಕರೆಯಲ್ಲಿ ಏಷ್ಯಾದ ಅತಿದೊಡ್ಡ ಕೈಗಾರಿಕಾ ಪ್ರದೇಶ ನಿರ್ಮಿಸಲಾಗಿದೆ. ರಸ್ತೆ, ಮೆಟ್ರೋ, ರೈಲು ಸಂಪರ್ಕ ಇದ್ದರೆ ಬೆಂಗಳೂರಿನ ಮೇಲಿನ ಒತ್ತಡ ಕಡಿಮೆಯಾಗುತ್ತದೆ ಎಂಬುದು ಉದ್ದೇಶ ಎಂದು ಸ್ಪಷ್ಟಪಡಿಸಿದ್ದಾರೆ.

***************

ಕೇಂದ್ರ ಸರ್ಕಾರ ಮೆಕ್ಕೆಜೋಳ ಖರೀದಿ ಮಾಡಲು ರಾಜ್ಯ ಸರ್ಕಾರಕ್ಕೆ ಪತ್ರ ಕಳುಹಿಸಿದ್ದು, ಶೀಘ್ರವೇ ರಾಜ್ಯ ಸರ್ಕಾರ ಬೆಂಬಲ ಬೆಲೆಯೊಂದಿಗೆ ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಕರ್ನಾಟಕ ರೈತ ಸೇನೆ ತಹಶೀಲ್ದಾರ್ ಕಚೇರಿ ಶಿರಸ್ತೇದಾರ ಗಣೇಶ ಚಳ್ಳಕೇರಿ ಅವರಿಗೆ ಮನವಿ ಸಲ್ಲಿಸಿತು.

ತಾಲ್ಲೂಕಿನಲ್ಲಿ ಸತತವಾಗಿ ಸುರಿದ ಭಾರಿ ಮಳೆಯಿಂದ ಅತಿವೃಷ್ಟಿಯಾಗಿದೆ. ರೈತರು ಬೀಜರಸಗೊಬ್ಬರ, ಕೀಟನಾಶಕ ಔಷಧ, ಕೃಷಿ ಕಾರ್ಮಿಕರಿಗೆ ಸೇರಿದಂತೆ ಎಕರೆಗೆ ೩೦ರಿಂದ ೪೦ ಸಾವಿರ ಖರ್ಚು ಮಾಡಿ ಬಿತ್ತನೆ ಮಾಡಿದ್ದಾರೆ. ಕೂಡಲೇ ರಾಜ್ಯ ಸರ್ಕಾರ ೩ ಸಾವಿರ ಬೆಲೆಯೊಂದಿಗೆ ಗೋವಿನಜೋಳ ಖರೀದಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಖರೀದಿ ಕೇಂದ್ರ ಆರಂಭಿಸದಿದ್ದಲ್ಲಿ ಇದೇ ೨೧ರಿಂದ ನಿರಂತರ ಧರಣಿ ಹಾಗೂ ಉಪವಾಸ ಸತ್ಯಾಗ್ರಹ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಧ್ವನಿ : ಅಧ್ಯಕ್ಷ ಶಂಕರಪ್ಪ ಅಂಬಾಲಿ

***************

ಮಕ್ಕಾದಿಂದ ಮದೀನಾಗೆ ತೆರಳುತ್ತಿದ್ದ ಉಮ್ರಾ ಯಾತ್ರಿಕರಿದ್ದ ಬಸ್ ಸೌದಿ ಅರೇಬಿಯಾದ ಮುಫ್ರಿಹತ್ ಅಪಘಾತಕ್ಕೀಡಾಗಿದ್ದು, ಕನಿಷ್ಠ ೪೫ ಮಂದಿ ಭಾರತೀಯ ಯಾತ್ರಿಕರು ಮೃತಪಟ್ಟಿದ್ದಾರೆ. ಈ ದುರಂತದಲ್ಲಿ ಹುಬ್ಬಳ್ಳಿ ಮೂಲದ ಗಣೇಶ ಪೇಟೆ ನಿವಾಸಿ ಅಬ್ದುಲ್ ಘಣಿ ಶಿರಹಟ್ಟಿ ಸಾವನ್ನಪ್ಪಿದ್ದಾರೆ.

ಸಾವಿನ ಸುದ್ದಿ ತಿಳಿಯುತ್ತಿದಂತೆ ಈ ಭಾಗದ ಶಾಸಕ  ಪ್ರಸಾದ್ ಅಬ್ಬಯ್ಯ ಮೃತರ ನಿವಾಸಕ್ಕೆ ತೆರಳಿ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಬಳಿಕ ಮಾತನಾಡಿದ ಅವರು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಜೊತೆ ಮಾತನಾಡಿ ಪಾರ್ಥಿವ ಶರೀರ ತರುವ ಬಗ್ಗೆ  ಚರ್ಚೆ ನಡೆಸಲಾಗುವದು ಎಂದು ಹೇಳಿದ್ದಾರೆ.

ಧ್ವನಿ : ಪ್ರಸಾದ್ ಅಬ್ಬಯ್ಯ

***************

ಹುಬ್ಬಳ್ಳಿಯಲ್ಲಿ ನಡೆದ ರಣಜಿ ಟ್ರೋಫಿಯ ೫ನೇ ಪಂದ್ಯದಲ್ಲಿ ಚಂಡೀಗಢದ ವಿರುದ್ಧ ಕರ್ನಾಟಕ ಇನ್ನಿಂಗ್ಸ್ ಹಾಗೂ ೧೮೫ ರನ್‌ಗಳ ಭರ್ಜರಿ ಜಯ ಸಾಧಿಸಿದೆ.

೩೨೫ ರನ್‌ಗಳ ಹಿನ್ನಡೆಯೊಂದಿಗೆ ಫಾಲೊಆನ್ ಪಡೆದ ಚಂಡೀಗಢ ೨ನೇ ಇನ್ನಿಂಗ್ಸ್‌ನಲ್ಲೂ ಕೇವಲ ೧೪೦ ರನ್‌ಗಳಿಗೆ ಸರ್ವ ಪತನ ಕಂಡಿತು.

೨೨೭ ರನ್ ಗಳಿಸಿದ ಸ್ಮರಣ್ ರವಿಚಂದ್ರನ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

***************

ಜಕ್ಕಲಮಡುಗು ಜಲಾಶಯದ ಅಣೆಕಟ್ಟೆಯ ಎತ್ತರವನ್ನು ಹೆಚ್ಚಿಸುವ ಅಥವಾ ಜಲಾಶಯಕ್ಕೆ ಹೊಂದಿಕೊಂಡಂತೆ ಪ್ರತ್ಯೇಕವಾಗಿ ಹೊಸ ಜಲಾಶಯವೊಂದನ್ನು ನಿರ್ಮಿಸುವ ಕುರಿತು ಚಿಂತನೆ ನಡೆಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮಕ್ಕೆ ಜಕ್ಕಲಮಡುಗು ನೀರು ಸರಬರಾಜು ಮಾಡುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಶ್ರೀನಿವಾಸಸಾಗರ ಕೆರೆಯ ನೀರಿನ ಸಂಗ್ರಹಣಾ ಸಾಮರ್ಥ್ಯವನ್ನು ಹೆಚ್ಚಿಸಿ ಕುಡಿಯುವ ನೀರಿಗೆ ಬಳಸಿಕೊಳ್ಳಲಾಗುವುದು ಎಂದು ಹೇಳಿದ್ದಾರೆ.

ಚಿಕ್ಕಬಳ್ಳಾಪುರ ನಗರಕ್ಕೆ ಪ್ರಸ್ತುತ ಸರಾಸರಿ ೧೦ ಲಕ್ಷ ಲೀಟರ್ ನೀರಿನ ಅಗತ್ಯವಿದೆ. ಈ ನೀರಿಗೆ ಕೊಳವೆಬಾವಿಗಳು ಮತ್ತು ಜಕ್ಕಲಮಡುಗು ಜಲಾಶಯ ಆಧಾರವಾಗಿದೆ. ಭವಿಷ್ಯದ ದೃಷ್ಟಿಯಿಂದ ನಗರದ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ಬೇಡಿಕೆ ಮತ್ತು ಅಗತ್ಯಕ್ಕೆ ನೀರನ್ನು ಒದಗಿಸಲು ಯೋಜನೆ ರೂಪಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

******* ಮುಕ್ತಾಯ *******